ಕರ್ನಾಟಕ ಲೋಕಸೇವಾ ಆಯೋಗ

"ಉದ್ಯೋಗ ಸೌಧ" ಬೆಂಗಳೂರು-560 001.

ಸಂಖ್ಯೆ: ಆರ್(1) 1147 /2024-25/ಪಿಎಸ್‌ಸಿ ದಿನಾಂಕ:31-12-2024

## ತಿದ್ದುಪಡಿ ಅಧಿಸೂಚನೆ

**ಉಲ್ಲೇಖ: ಪಿಎಸ್ ಸಿ 1 ಆರ್ ಟಿ ಬಿ 4/2024, ದಿ:20-09-2024**

********

ಆಯೋಗವು ಉಲ್ಲೇಖಿತ ದಿನಾಂಕ:20-09-2024ರ ಅಧಿಸೂಚನೆಯಲ್ಲಿ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ 42 ಮತ್ತು ಸಹಾಯಕ ಕೃಷಿ ಅಧಿಕಾರಿ 231 ಹೈ.ಕ ವೃಂದದ ಹುದ್ದೆಗಳಿಗೆ ಅಧಿಸೂಚನೆ ಜಾರಿ ಮಾಡಿ ಅರ್ಜಿ ಸಲ್ಲಿಕೆಯ ದಿನಾಂಕವನ್ನು 07-10-2024ರಿಂದ 07-11-2024ರವರೆಗೆ ನಿಗದಿಪಡಿಸಲಾಗಿತ್ತು. ಸರ್ಕಾರವು ದಿನಾಂಕ:18-09-2024ರಂದು ಜಾರಿ ಮಾಡಿದ್ದ ಕ್ರೀಡಾ ಸಾಧಕ ಅಭ್ಯರ್ಥಿಗಳ ಮೀಸಲಾತಿಯನ್ನು ಸದರಿ ಹುದ್ದೆಗಳಿಗೂ ಅಳವಡಿಸಿಕೊಳ್ಳಬೇಕಾದ್ದರಿಂದ ಅರ್ಜಿ ಸ್ವೀಕಾರ ಪ್ರಕ್ರಿಯೆಯನ್ನು ಮುಂದೂಡಲಾಗಿರುತ್ತದೆ.

ಪ್ರಸ್ತುತ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 295 ಸೇನೆನಿ 2023 ದಿನಾಂಕ:04-12-2024ರಲ್ಲಿ ಕ್ರೀಡಾ ಮೀಸಲಾತಿಗೆ ಸಂಬಂಧಿಸಿದಂತೆ ಸರ್ಕಾರವು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 09ಕ್ಕೆ ತಿದ್ದುಪಡಿ ಮಾಡಿರುವುದನ್ನು ಪುನರ್ ಪರಿಶೀಲಿಸಲಾಗುತ್ತಿರುವುದರಿಂದ ರಾಜ್ಯ ಸಿವಿಲ್ ಸೇವೆಯಲ್ಲಿನ ನೇರ ನೇಮಕಾತಿಯಲ್ಲಿ ಕ್ರೀಡಾ ಸಾಧಕರಿಗೆ ಶೇಕಡಾ 2ರಷ್ಟು ಹುದ್ದೆಗಳನ್ನು ಮೀಸಲಿರಿಸಿ ಹೊರಡಿಸಲಾಗಿರುವ ದಿನಾಂಕ:18-09-2024ರ ಅಧಿಸೂಚನೆಯನ್ನ ತಕ್ಷಣದಿಂದ ಜಾರಿಗೆ ಬರುವಂತೆ ತಡೆಹಿಡಿಯಲಾಗಿದೆ ಎಂದು ಎಲ್ಲಾ ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳಿಗೆ ಈಗಾಗಲೇ ದಿನಾಂಕ:20-09-2024ರಂದು ಜಾರಿ ಮಾಡಲಾಗಿರುವ ಅಧಿಸೂಚನೆಯಲ್ಲಿನ ಮೀಸಲಾತಿ ವರ್ಗೀಕರಣದ ಅನ್ವಯ ಆಯ್ಕೆ ಪ್ರಕ್ರಿಯೆಯನ್ನು ಮುಂದುವರೆಸಲಾಗುತ್ತಿದ್ದು ಅರ್ಜಿ ಸಲ್ಲಿಕೆಯ ಪ್ರಾರಂಭಿಕ ದಿನಾಂಕ ಮತ್ತು ಕೊನೆಯ ದಿನಾಂಕಗಳನ್ನು ಕೆಳಕಂಡಂತೆ ಮರು ನಿಗದಿಪಡಿಸಲಾಗಿದೆ.

| | |
|---|---|
| ಅರ್ಜಿ ಸಲ್ಲಿಸುವ ಪ್ರಾರಂಭಿಕ ದಿನಾಂಕ | 03-01-2025 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 01-02-2025 |

ಮುಂದುವರೆದು, ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ, ಅರ್ಜಿ ಶುಲ್ಕ ಇತ್ಯಾದಿ ವಿವರಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ದಿನಾಂಕ:20-09-2024ರ ಅಧಿಸೂಚನೆಯನ್ನು ನೋಡಬಹುದಾಗಿದೆ.

ಸಹಿ/-

(ರಮಣದೀಪ್ ಚೌಧರಿ.)

ಕಾರ್ಯದರ್ಶಿ,

ಕರ್ನಾಟಕ ಲೋಕಸೇವಾ ಆಯೋಗ.